ಶ್ರೀ ಜಿ. ಪುಟ್ಟಸ್ವಾಮಿಗೌಡ :– (ಮಾನ್ಯ ಕೃಷಿ ಮತ್ತು ತೋಟಗಾರಿಕೆ ಮಂತ್ರಿಗಳು):–ಮಾನ್ಯ ಮುಖ್ಯ ಮಂತ್ರಿಗಳ ಪರವಾಗಿ, ಈ ಹೇಳಿಕೆಯನ್ನು ಕೊಡುತ್ತಿದ್ದೇನೆ.

ಮಾನ್ಯ ಸದಸ್ಯರು ತಮ್ಮ ಗಮನ ಸೆಳೆಯುವ ಸೂಚನೆಯಲ್ಲಿ ಮೂರು ವಿಷಯಗಳನ್ನು ಎತ್ತಿದ್ದಾರೆ. ಅವುಗಳು ಈ ಕೆಳಕಂಡಂತಿವೆ.

1) ಕರ್ನಾಟಕ ರಾಜ್ಯ ಗಡಿ ಪ್ರದೇಶದಲ್ಲಿ ಬರುವ ರಸ್ತೆ, ಸೇತುವೆ ನಿರ್ಮಾಣಕ್ಕೆ ಹಣ ಬಿಡುಗಡೆಯ ಬಗ್ಗೆ

ಮಾನ್ಯ ಹಣಕಾಸಿನ ಸಚಿವರು 1990–91 ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಕರ್ನಾಟಕ ರಾಜ್ಯದ ಗಡಿ ಪ್ರದೇಶದ ಅಭಿವೃದ್ಧಿಗೆ 5.0 ಕೋಟಿ ರೂ. ಗಳ ಅನುದಾನವನ್ನು ನಿಗದಿಪಡಿಸಲಾಗಿದೆ ಎಂದು ಸೂಚಿಸಿದರು ಈ ಬಗ್ಗೆ ರಸ್ತೆಯ ಅಭಿವೃದ್ಧಿಯನ್ನು ತೆಗೆದುಕೊಳ್ಳುವುದಕ್ಕೆ ಪ್ರಸ್ತಾವನೆಗಳನ್ನು ಸಂಬಂಧಪಟ್ಟ ಮುಖ್ಯ ಇಂಜಿನಿಯರುಗಳಿಂದ ತರಿಸಿ, ಕ್ರೋಢೀಕರಿಸಲಾಗಿದೆ. ಈ ಬಗ್ಗೆ ಸೂಕ್ತ ಅನುದಾನವನ್ನು ಬಿಡುಗಡೆ ಮಾಡುವುದಕ್ಕಾಗಿ ವಿಷಯವು ಯೋಜನಾ ಇಲಾಖೆಯ ಪರಿಶೀಲನೆಯಲ್ಲಿ ಇದೆ. ಈ ಬಗ್ಗೆ ಶೀಘ್ರವಾಗಿ ತೀರ್ಮಾನ ತೆಗೆದುಕೊಳ್ಳಲಾಗುವುದು.

2) ಜಿಲ್ಲಾ ಪರಿಷತ್ತಿನ ಅನುದಾನದಲ್ಲಿ ಬರುವ ರಸ್ತೆಗಳನ್ನು ಮೇಲ್ದರ್ಜೆಗೆ ಏರಿಸುವ ಬಗ್ಗೆ :

ಜಿಲ್ಲಾ ಪರಿಷತ್ತಿನ ಅನುದಾನದಲ್ಲಿರುವ ಗ್ರಾಮೀಣ ರಸ್ತೆಗಳನ್ನು ಹಾಗೂ ಇತರ ಜಿಲ್ಲಾ ರಸ್ತೆಗಳನ್ನು ಮೇಲ್ದರ್ಜೆಗೆ ಏರಿಸಿ, ಲೋಕೋಪಯೋಗಿ ಇಲಾಖೆಯ ಅಧಿಕಾರದ ವ್ಯಾಪ್ತಿಗೆ ತೆಗೆದುಕೊಳ್ಳುವಂತೆ ಬಹಳವಾಗಿ ಬೇಡಿಕೆಗಳು ಬಂದಿವೆ. ಈ ಬಗ್ಗೆ ಒಟ್ಟಾಗಿ ಬಂದಿರುವ 9845 ಕಿ. ಮೀ. ಉದ್ದದ ರಸ್ತೆಗಳನ್ನು ಮೇಲ್ದರ್ಜೆಗೆ ಏರಿಸುವ ಪ್ರಸ್ತಾವನೆಯನ್ನು ಪರಿಶೀಲಿಸಿ, ಒಟ್ಟಾರೆ 6 ಸಾವಿರ ಕಿ. ಮೀ. ಉದ್ದದ ರಸ್ತೆಗಳನ್ನು ಮೇಲ್ದರ್ಜೆಗೆ ಏರಿಸುವುದಕ್ಕೆ ಒಂದು ತೀರ್ಮಾನವನ್ನು ತೆಗೆದುಕೊಳ್ಳಲಾಗಿದೆ. ಈ ಪ್ರಸ್ತಾವನೆಯು ಆರ್ಥಿಕ ಇಲಾಖೆ ಹಾಗೂ ಯೋಜನಾ ಇಲಾಖೆಯಲ್ಲಿ ಅನುದಾನವನ್ನು ನಿಗದಿ ಮಾಡುವ ಬಗ್ಗೆ ತೀವ್ರ ಪರಿಶೀಲನೆಯಲ್ಲಿದೆ.

3) ಎ. ಪಿ. ಎಂ. ಸಿ. ಫಂಡಿನ ಅಡಿಯಲ್ಲಿ ರಸ್ತೆ ಕಾಮಗಾರಿಗಳನ್ನು ತೆಗೆದುಕೊಳ್ಳುವ ಬಗ್ಗೆ :

1990–91 ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಮಾನ್ಯ ಆರ್ಥಿಕ ಸಚಿವರು ಎ. ಪಿ. ಎಂ. ಸಿ.ಗಳಲ್ಲಿರುವ ಇದುಗಂಟಿನಿಂದ ರಸ್ತೆಗಳನ್ನು ಅಭಿವೃದ್ಧಿ ಪಡಿಸುವುದಕ್ಕೆ ಪ್ರಸ್ತಾಪವನ್ನು ಮಾಡಿದ್ದರು. ಇದರಲ್ಲಿ 1990–91ನೇ ಸಾಲಿಗೆ ಸುಮಾರು 20.0 ಕೋಟಿ ರೂ.ಗಳ ಅಭಿವೃದ್ಧಿ ಕಾರ್ಯಕ್ರಮವನ್ನು ತೆಗೆದುಕೊಳ್ಳುವ ಬಗ್ಗೆ ಪ್ರಸ್ತಾಪ ವಿದ್ದಿತು. ಈ ಬಗ್ಗೆ ಎ.ಪಿ.ಎಂ.ಸಿ. ಫಂಡ ಹಣವನ್ನು ಬಿಡುಗಡೆ ಮಾಡುವ ಬಗ್ಗೆ ಶೀಘ್ರವೇ ಒಂದು ತೀರ್ಮಾನ ತೆಗೆದುಕೊಳ್ಳಲಾಗುವುದು.

ಮೇಲ್ಕಂಡ ಮೂರು ಕಾಮಗಾರಿಗಳ ಅಡಿಯಲ್ಲಿ ಕಾಮಗಾರಿಗಳನ್ನು ತೆಗೆದುಕೊಳ್ಳಲು ಅನುಕೂಲವಾಗುವಂತೆ ಶೀಘ್ರ ತೀರ್ಮಾನ ತೆಗೆದುಕೊಳ್ಳಲಾಗುವುದು.

5) ಮಂಡ್ಯ ಜಿಲ್ಲಾ ಆಸ್ಪತ್ರೆಯಲ್ಲಿ ಹಾಸಿಗೆಗಳನ್ನು ಹೆಚ್ಚಿಸುವದು.

ಶ್ರೀ ಎಂ. ಎಸ್. ಆತ್ಮಾನಂದ :– ಮಾನ್ಯ ಉಪಾಧ್ಯಕ್ಷೀಣಿಯವರೇ, ಮಂಡ್ಯ ನಗರದಲ್ಲಿ ಜಿಲ್ಲಾ ಆಸ್ಪತ್ರೆಯಿದ್ದು, ಈ ಆಸ್ಪತ್ರೆಯಲ್ಲಿ ಸುಮಾರು ಇನ್ನೂರೈವತ್ತು ಹಾಸಿಗೆಗಳಿವೆ. ಎಲ್ಲಾ ವಿಧವಾದ ವಿಶೇಷ ತಜ್ಞರನ್ನೊಳಗೊಂಡಿರುವ ಆಸ್ಪತ್ರೆ ಇಡೀ ಜಿಲ್ಲೆಯಲ್ಲಿ ಇದು ಒಂದೇ ಆಗಿದ್ದು, ಜಿಲ್ಲೆಯ ಜನತೆಗೆ ವೈದ್ಯಕೀಯ ಸೇವಾ ಸೌಲಭ್ಯವನ್ನು ಒದಗಿಸುತ್ತದೆ. ಆದರೆ, ಈ ಆಸ್ಪತ್ರೆಗೆ ಬರುತ್ತಿರುವ ಒಳರೋಗಿಗಳ ಸಂಖ್ಯೆ ಬಹಳ ಹೆಚ್ಚಾಗಿದ್ದು ಆಸ್ಪತ್ರೆಯಲ್ಲಿರುವ ಹಾಸಿಗೆಗಳು, ಈ ರೋಗಿಗಳಿಗೆ ಸಾಲದಾಗಿದೆ. ನೆಲದ ಮೇಲೆ ರೋಗಿಗಳನ್ನು ಮಲಗಿಸುತ್ತಾ ಇದ್ದು ತುಂಬಾ ತೊಂದರೆಯಾಗಿದೆ. ಕಳೆದ ಎರಡು ಮೂರು ವರ್ಷಗಳಿಂದ ಹಾಸಿಗೆ ಸಂಖ್ಯೆ ಹೆಚ್ಚಿಸಲು ಸಾರ್ವಜನಿಕರು ಸರ್ಕಾರಕ್ಕೆ ಮಾಡಿರುವ ಈ ವರೆಗಿನ ಮನವಿಗಳು ಫಲಪ್ರದವಾಗಿಲ್ಲ. ಹಾಸಿಗೆಗಳ ಸಂಖ್ಯೆಗಳನ್ನು ಹೆಚ್ಚಿಸುವುದು ಅತೀ ಅವಶ್ಯವಾಗಿದೆ ಹಾಗೂ ಜರೂರಾಗಿದೆ. ಆದುದರಿಂದ ಹಾಸಿಗೆಗಳ ಸಂಖ್ಯೆಯನ್ನು ಹೆಚ್ಚಿಸಲು ಶೀಘ್ರ ಕ್ರಮ ಕೈಗೊಳ್ಳಬೇಕೆಂದು ಸರ್ಕಾರವನ್ನು ಒತ್ತಾಯಿಸುತ್ತೇನೆ.

ಶ್ರೀಮತಿ ಕೆ. ಎಸ್. ನಾಗರತ್ನಮ್ಮ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :– ಮಾನ್ಯ ಉಪಾಧ್ಯಕ್ಷೀಣಿಯವರೇ, ಮಂಡ್ಯ ಜಿಲ್ಲೆಯ ಸಾರ್ವಜನಿಕ ಆಸ್ಪತ್ರೆಯಲ್ಲಿ ಹಾಲಿ 250 ಹಾಸಿಗೆಗಳಿವೆ. ಈ ಹಾಸಿಗೆಗಳ ಸಂಖ್ಯೆಯನ್ನು 650 ಕ್ಕೆ ಹೆಚ್ಚಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ. ಇದಕ್ಕೆ ತಗಲುವ ಅನಾವರ್ತ ಅಂದಾಜು ವೆಚ್ಚವು ರೂ. 5–00 ಕೋಟಿ ಇರುತ್ತದೆ.